# ಬಿಜೆಪಿ ಟಿಕೆಟ್ ಸಿಕ್ಕ ಬೆನ್ನಲ್ಲೇ ಜಾಧವ್‌ಗೆ ನೋಟಿಸ್

ಉ.ವಾ. 22/3/19

ಬೆಂಗಳೂರು: ಕಾಂಗ್ರೆಸ್ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಉಮೇಶ್ ಜಾಧವ್‌ಗೆ ಬಿಜೆಪಿ ಟಿಕೆಟ್ ಘೋಷಣೆ ಬೆನ್ನಲ್ಲೇ ಸ್ಪೀಕರ್ ಕಚೇರಿಯಿಂದ ನೋಟಿಸ್ ಜಾರಿ ಮಾಡಿ, ಸೋಮವಾರ ಬೆಳಗ್ಗೆ 11.30ಕ್ಕೆ ಸ್ಪೀಕರ್ ಕಚೇರಿಗೆ ವಿಚಾರಣೆಗೆ ಆಗಮಿಸುವಂತೆ ಸೂಚಿಸಲಾಗಿದೆ.

**■ ಸೋಮವಾರ ಸ್ಪೀಕರ್ ಕಚೇರಿಗೆ ವಿಚಾರಣೆಗೆ ಆಗಮಿಸುವಂತೆ ಸೂಚನೆ**

ಚಿಂಚೋಳ್ಳಿ ಕ್ಷೇತ್ರದ ಕೆಲವು ಸಂಘ-ಸಂಸ್ಥೆಗಳು ಉಮೇಶ್ ಜಾಧವ್ ಅವರ ರಾಜೀನಾಮೆ ಅಂಗೀಕರಿಸಬಾರದೆಂದು ಮನವಿ ಮಾಡಿವೆ. ಜತೆಗೆ, ಈ ಹಿಂದೆ ಶಾಸಕತ್ವ ಅನರ್ಹತೆ ದೂರಿಗೆ ಸಂಬಂಧಿಸಿದಂತೆ ನೀಡಿದ್ದ ಸ್ಪಷ್ಟನೆಯಲ್ಲಿ ಪಕ್ಷ ತೊರೆಯುವುದಿಲ್ಲ, ವಿಪ್ ಉಲ್ಲಂಘಿಸಿಲ್ಲ ಎಂದು ತಿಳಿಸಲಾಗಿತ್ತು. ನಂತರ ರಾಜೀನಾಮೆ ನೀಡಲಾಗಿದೆ. ಹೀಗಾಗಿ, ಕೆಲವು ಗೊಂದಲಗಳಿದ್ದು ವಿಚಾರಣೆಗೆ ಆಗಮಿಸುವಂತೆ ನೋಟಿಸ್‌ನಲ್ಲಿ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.